# ಸಮಗ್ರ ಶಿಕ್ಷಣ ಕರ್ನಾಟಕ

**ರಾಜ್ಯ ಯೋಜನಾ ನಿರ್ದೇಶಕರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು – 560 001**

ಕಡತ ಸಂಖ್ಯೆ: SSK/IE/ 32/2023-JDP, E-20141 ದಿನಾಂಕ: 23.11.2022

## -ಸುತ್ತೋಲೆ-

ವಿಷಯ: ಡಿಸೆಂಬರ್ 03, 2023 ರಂದು ವಿಶ್ವ ವಿಶೇಷ ಚೇತನ ದಿನಾಚರಣೆ ಆಚರಿಸುವ ಕುರಿತು

ಉಲ್ಲೇಖ: ಈ ಕಚೇರಿ ಸುತ್ತೋಲೆ ಸಂಖ್ಯೆ: ಸಶಿಕ/ಸಶಿ/10/2023/JDA- E 14652 ದಿನಾಂಕ: 30/06/2023

*******

ವಿಶ್ವಸಂಸ್ಥೆಯ ಸಾಮಾನ್ಯ ಸಭೆಯ ನಿರ್ಣಯ 47/3 ರಂತೆ ಪ್ರತಿ ವರ್ಷ ಡಿಸೆಂಬರ್ 03 ರಂದು ವಿಶ್ವ ವಿಶೇಷ ಚೇತನರ ದಿನಾಚರಣೆ ಆಚರಿಸಲು ನಿರ್ಣಯವಾಗಿದೆ.

**ವಿಶ್ವ ವಿಶೇಷ ಚೇತನರ ದಿನಾಚರಣೆಯ ಉದ್ದೇಶಗಳು:**

- ವಿಶೇಷ ಚೇತನರ ಸಮಸ್ಯೆಗಳನ್ನು ಅರಿಯುವುದು ಮತ್ತು ಇವರ ಆತ್ಮಗೌರವನ್ನು ಹೆಚ್ಚಿಸುವ, ಹಕ್ಕುಗಳನ್ನು ರಕ್ಷಿಸುವ ಮತ್ತು ಇವರ ಒಳಿತಿಗಾಗಿ ಕ್ರಮವಹಿಸುವುದಾಗಿದೆ.
- ವಿಶೇಷ ಚೇತನರನ್ನು ಮುಖ್ಯವಾಹಿನಿಗೆ ಸೇರಿಸುವ ಕುರಿತು ಜಾಗೃತಿ, ಸಮಾನ ಅವಕಾಶ, ಸೌಲಭ್ಯ ಕಲಿಸುವುದು.
- ವಿಶೇಷ ಚೇತನರಲ್ಲಿ ಆತ್ಮವಿಶ್ವಾಸ ಬೆಳೆಸುವುದು ಹಾಗೂ ಸಮಾಜದ ಇತರ ವ್ಯಕ್ತಿಗಳಂತೆ ಸಮಾನವಾದ ಅವಕಾಶಗಳು ಒದಗಿಸುವುದು ಮತ್ತು ಅವರಿಗೆ ಯೋಗ್ಯವಾದ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವುದು.

ಪ್ರತಿ ವರ್ಷದಂತೆ, 2023-24 ನೇ ಸಾಲಿನಲ್ಲಿಯೂ ಡಿಸೆಂಬರ್, 03 ರಂದು ಶಾಲಾ, ಕ್ಲಸ್ಟರ್, ಬ್ಲಾಕ್ ಹಾಗೂ ಜಿಲ್ಲಾ ಹಂತದಲ್ಲಿ ವಿಶ್ವವಿಶೇಸ ಚೇತನರ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸುವುದು.

**ಶಾಲಾ ಹಂತದಲ್ಲಿ ಹಮ್ಮಿಕೊಳ್ಳಬಹುದಾದ ಚಟುವಟಿಕೆಗಳು**

- ಪೂರ್ವಭಾವಿಯಾಗಿ ಚಟುವಟಿಕೆ/ ಕಾರ್ಯಕ್ರಮಗಳನ್ನು ಯೋಜಿಸಿ, ಅಗತ್ಯ ಸಿದ್ಧತೆಗಳೊಂದಿಗೆ ಅರ್ಥಪೂರ್ಣವಾಗಿ ಆಚರಿಸುವುದು.
- ವಿದ್ಯಾರ್ಥಿಗಳಿಗೆ ಹಾಗೂ ಪೋಷಕರಿಗೆ ವಿವಿಧ ರೀತಿಯ ನ್ಯೂನ್ಯತೆಗಳ ಬಗ್ಗೆ ಮಾಹಿತಿ ನೀಡುವುದು ಹಾಗೂ ಇಂತಹ ವಿದ್ಯಾರ್ಥಿಗಳಿಗೆ ಕಲಿಕಾ ಮತ್ತು ಸಹಪಠ್ಯ ಚಟುವಟಿಕೆಗಳಲ್ಲಿ ನೀಡಬೇಕಾದ ಸಹಕಾರದ ಕುರಿತು ಅರಿವು ಮೂಡಿಸುವುದು, ಈ ಕುರಿತು ಮುಕ್ತ ಚರ್ಚೆಗೆ ಅವಕಾಶ ಒದಗಿಸುವುದು.
- ಉಲ್ಲೇಖಿತ ಮಾರ್ಗಸೂಚಿಯಲ್ಲಿ ಪ್ರತಿ ವಿಶೇಷ ಅಗತ್ಯವುಳ್ಳ ವಿದ್ಯಾರ್ಥಿಗೆ ಒಬ್ಬ ಸಾಮಾನ್ಯ ವಿದ್ಯಾರ್ಥಿಯನ್ನು 'ಆಪ್ತ ಗೆಳೆಯ' - Buddy ಎಂದು ಗುರುತಿಸಿ Buddy System ಅಳವಡಿಸಲು ತಿಳಿಸಲಾಗಿತ್ತು. ಈ ವ್ಯವಸ್ಥೆಯ ಆಪ್ತ ಗೆಳೆಯರ ಹಾಗೂ ಅವರಿಂದ ಬೆಂಬಲ ಪಡೆದ ವಿದ್ಯಾರ್ಥಿಯ ಅನಿಸಿಕೆಗಳನ್ನು ಎಲ್ಲರೊಂದಿಗೆ ಹಂಚಿಕೊಳ್ಳುವ ಅವಕಾಶ ಒದಗಿಸುವುದು.
- ಶಾಲಾ ಹಂತದಲ್ಲಿ ವಿಶೇಷ ಚೇತನ ಮಕ್ಕಳಿಗಾಗಿ ಅವರ ಪ್ರತಿಭೆ ಅನಾವರಣಕ್ಕೆ ಸೂಕ್ತ ವೇದಿಕೆ ಒದಗಿಸಿ, ಅವರಿಗೆ ಅವಕಾಶ ನೀಡುವುದು. ಉದಾ: ಅವರಲ್ಲಿನ ಕಲೆ, ಸೃಜನಶೀಲತೆ, ನಾವಿನ್ಯತೆ, ಕ್ರೀಡಾ ಕೌಶಲ ಇತ್ಯಾದಿ.
- ವಿಶೇಷ ಚೇತರನ್ನು ಗೌರವಿಸುವ, ಸಮಾನ ಅವಕಾಶ ನೀಡುವ ಕುರಿತು ಎಲ್ಲಾ ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸುವುದು.

ಜಿಲ್ಲಾ ಹಂತದಲ್ಲಿ ಉಪನಿರ್ದೇಶಕರು (ಆಡಳಿತ) ಮತ್ತು ಬ್ಲಾಕ್ ಹಂತದಲ್ಲಿ ಕ್ಷೇತ್ರಶಿಕ್ಷಣಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಿ ವಿಶ್ವ ವಿಶೇಷಚೇತನರ ದಿನಾಚರಣೆಯನ್ನು ಯಶಸ್ವಿಯಾಗಿ ಆಯೋಜಿಸುವುದು. ಸಹಭಾಗಿ ಇಲಾಖೆಗಳಾದ ಮಹಿಳಾ ಮತ್ತು ಮಕ್ಕಳಕಲ್ಯಾಣ ಇಲಾಖೆ, RDPR ಹಾಗೂ ಸ್ಥಳೀಯ ಸಂಸ್ಥೆಗಳು, ದಾನಿಗಳು, ಸಂಘ ಸಂಸ್ಥೆಗಳ ಸಹಕಾರ ಹಾಗೂ ಪಾಲ್ಗೊಳ್ಳುವಿಕೆಯೊಂದಿಗೆ ಅರ್ಥಪೂರ್ಣವಾಗಿ ಆಚರಿಸುವುದು. ಕ್ಲಸ್ಟರ್ ಹಂತದಲ್ಲಿಯೂ ಆಚರಿಸಲು ಕ್ರಮವಹಿಸುವುದು.

**ಕ್ಲಸ್ಟರ್, ಬ್ಲಾಕ್ ಹಾಗೂ ಜಿಲ್ಲಾ ಹಂತದಲ್ಲಿ ಹಮ್ಮಿಕೊಳ್ಳಬಹುದಾದ ಚಟುವಟಿಕೆಗಳು:-**

ವಿಶ್ವ ವಿಶೇಷ ಚೇತನ ದಿನಾಚರಣೆ ಸಂದರ್ಭದಲ್ಲಿ ಕ್ರೀಡಾ, ಸಾಹಿತ್ಯಿಕ, ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ವಿಶೇಷ ಸಾಧನೆ ಮಾಡಿರುವ ವಿಶೇಷ ಚೇತನರನ್ನು ಗೌರವಿಸುವುದು.

- ವಿಶೇಷ ಚೇತನ ಮಕ್ಕಳ ಕಲಿಕೆಗೆ ಗಮನಾರ್ಹ ಸಹಕಾರ ನೀಡಿರುವ, ಅವರಲ್ಲಿನ ಪ್ರತಿಭೆಗೆ ಪ್ರೋತ್ಸಾಹ ನೀಡಿ ಅವರ ಸಾಧನೆಗೆ ಬೆಂಬಲಿಸಿರುವ, ಶಾಲೆಯಲ್ಲಿ ತಡೆಮುಕ್ತ ವಾತಾವರಣ ನಿರ್ಮಿಸಿ ವಿಶೇಷ ಚೇತನ ಸ್ನೇಹಿ ವಾತಾವರಣ ನಿರ್ಮಿಸಿರುವ ಶಿಕ್ಷಕರನ್ನು ಗೌರವಿಸುವುದು.
- ಕ್ರೀಡಾ, ಸಾಹಿತ್ಯಿಕ, ಸಾಂಸ್ಕೃತಿಕ ಸ್ಪರ್ಧೆಗಳನ್ನು ಆಯೋಜಿಸುವುದು, ಇದಕ್ಕೆ ಸ್ಥಳೀಯ ಸಂಸ್ಥೆಗಳ ದಾನಿಗಳ ಸಹಕಾರ ಪಡೆಯುವುದು.
- ವಿಶೇಷ ಚೇತನರನ್ನು ಮುಖ್ಯವಾಹಿನಿಗೆ ತಂದಿರುವ, ಅವರಿಗೆ ಅವಕಾಶಗಳನ್ನು ನೀಡಿರುವ ಸಂಸ್ಥೆಗಳ/ ವ್ಯಕ್ತಿಗಳ ಯಶೋಗಾಥೆಯನ್ನು ಹಂಚಿಕೊಳ್ಳುವುದು, ಅವರನ್ನು ಗೌರವಿಸುವುದು.
- ಸಮುದಾಯದವರಿಗೂ ಸಹ ವಿಶೇಷ ಅಗತ್ಯವುಳ್ಳವರ ಕುರಿತು ಮಾಹಿತಿ ನೀಡುವುದು, ಅವರಲ್ಲಿಯೂ ಜಾಗೃತಿ ಮೂಡಿಸುವ ಚಟುವಟಿಕೆಗಳನ್ನು ಹಮ್ಮಿಕೊಳ್ಳುವುದು.

ಸ್ಥಳೀಯ ಪರಿಸರಕ್ಕೆ ತಕ್ಕಂತೆ, ಕಾರ್ಯಕ್ರಮ/ಚಟುವಟಿಕೆಗಳನ್ನು ಆಯೋಜಿಸುವುದು ಹಾಗೂ ಈ ಕುರಿತು ಸಾಕಷ್ಟು ಪೂರ್ವಭಾವಿಯಾಗಿ ಯೋಜಿಸಿ, ಯಾವುದೇ ಹಂತದಲ್ಲಿ ಲೋಪಬಾರದಂತೆ, ಯಾವುದೇ ವಿದ್ಯಾರ್ಥಿಯ ಘನತೆಗೆ ಚ್ಯುತಿ ಬಾರದಂತೆ ಮುಂಜಾಗ್ರತೆ ವಹಿಸುವುದು.

ವಿಶ್ವವಿಶೇಷ ಚೇತನರ ದಿನಾಚರಣೆಯನ್ನು ಯಶಸ್ವಿಯಾಗಿ ಆಯೋಜಿಸಿ, ಈ ಕುರಿತುತಮ್ಮ ವ್ಯಾಪ್ತಿಯಲ್ಲಿ ವಿವಿಧ ಹಂತದಲ್ಲಿ ನಡೆದ ಆಯ್ದ ಕಾರ್ಯಕ್ರಮದ ಫೋಟೋ ಸಹಿತ ವರದಿಯನ್ನು ರಾಜ್ಯ ಕಚೇರಿಗೆ email : cwsnkar2020@gmail.com ಗೆ ಮೇಲ್ ಮೂಲಕ ವರದಿ ಸಲ್ಲಿಸುವುದು. ಉತ್ತಮ Photo/Video ಗಳನ್ನು Shala portal (Shaala Gunvatta) ನಲ್ಲಿ ಅಪ್‌ಲೋಡ್ ಮಾಡಲಾಗುವುದು.

**ರಾಜ್ಯ ಯೋಜನಾ ನಿರ್ದೇಶಕರು**
**ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು**

ಗೆ,

ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಹಾಗೂ ಜಿಲ್ಲಾ ಯೋಜನಾ ಸಮನ್ವಯಾಧಿಕಾರಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ರವರ ಕ್ರಮಕ್ಕೆ.

ಪ್ರತಿಯನ್ನು ಮಾಹಿತಿಗಾಗಿ ಹಾಗೂ ಅನುಸರಣೆಗಾಗಿ:

1. ಅಪರ ಆಯುಕ್ತರು ಕಲಬುರಗಿ ಹಾಗೂ ಧಾರವಾಡ ವಿಭಾಗರವರಿಗೆ
2. ವಿಭಾಗೀಯ ಸಹನಿರ್ದೇಶಕರು, ಬೆಂಗಳೂರು, ಮೈಸೂರು, ಕಲಬುರಗಿ ಹಾಗೂ ಧಾರವಾಡ ರವರಿಗೆ

ಪ್ರತಿಯನ್ನು ಗೌರವಪೂರ್ವಕವಾಗಿ:-

1. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು ರವರಿಗೆ ಸಲ್ಲಿಸಿದೆ.
2. ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ , ನೃಪತುಂಗ ರಸ್ತೆ, ಬೆಂಗಳೂರು ರವರಿಗೆ ಸಲ್ಲಿಸಿದೆ.